# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 576
ಸದಸ್ಯರ ಹೆಸರು : ಶ್ರೀ ಶರಣಪ್ಪ ಮಟ್ಟೂರು (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 13.12.2018.
ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು.

| ಕ್ರ.ಸಂ. | ಪ್ರಶ್ನೆ | ಉತ್ತರ |
| --- | --- | --- |
| ಅ) | ಆದರ್ಶ, ಕಿತ್ತೂರು ರಾಣಿ ಚನ್ನಮ್ಮ, ನವೋದಯ, ಮೊರಾರ್ಜಿ ದೇಸಾಯಿ ಶಾಲೆಗಳಲ್ಲಿ 40 ವಿದ್ಯಾರ್ಥಿಗಳಿಗೆ ಒಬ್ಬ ಶಿಕ್ಷಕರನ್ನು ಮಂಜೂರಾತಿ ನೀಡಲಾಗಿದ್ದು, ಆದರೆ, ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳ ತರಗತಿ ಅನುಪಾತ 70 ವಿದ್ಯಾರ್ಥಿಗಳಿಗೆ ಒಬ್ಬ ಶಿಕ್ಷಕರನ್ನು ಮಂಜೂರಾತಿ ನೀಡಲಾಗಿರುವುದು ನಿಜವೇ; ಈ ತಾರತಮ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಗುಣಮಟ್ಟದ ಶಿಕ್ಷಣ ನೀಡಲು ಸರ್ಕಾರ ಮತ್ತು ಅನುದಾನಿತ ಶಾಲೆಗಳಿಗೆ ವಿದ್ಯಾರ್ಥಿಗಳ ತರಗತಿಗೆ ಅನುಪಾತ 40 ವಿದ್ಯಾರ್ಥಿಗಳಿಗೆ ಒಬ್ಬ ಶಿಕ್ಷಕರನ್ನು ಮಂಜೂರಾತಿ ನೀಡಲು ಸರ್ಕಾರ ತೆಗೆದುಕೊಂಡ ಕ್ರಮ ಏನು; | ಪರಿಶೀಲನೆಯಲ್ಲಿರುತ್ತದೆ. |
| ಇ) | ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟದ ಹೆಚ್ಚಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು; | ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಈ ಕೆಳಕಂಡ ಐದು ಗುಣಾತ್ಮಕ ಕಾರ್ಯಕ್ರಮಗಳನ್ನು ಯೋಜಿಸಿದೆ;-<br>1. ಶಿಕ್ಷಣ ಗುಣಮಟ್ಟ ಸುಧಾರಣ ಕಾರ್ಯಕ್ರಮ.<br>2. ಗುಣಮಟ್ಟ ಖಾತ್ರಿಯ ಉಪಕ್ರಮಗಳು.<br>3. ತಂತ್ರಜ್ಞಾನ ಆಧಾರಿತ ಕಲಿಕೆ.<br>4. ವಿದ್ಯಾರ್ಥಿಗಳಿಗೆ ಪ್ರೋತ್ಸಾಹಕಗಳು.<br>5. ವಿದ್ಯಾರ್ಥಿಗಳನ್ನು ಪ್ರೇರೇಪಿಸುವ ಕಾರ್ಯಕ್ರಮಗಳು. |
| ಈ) | ಗುಣಮಟ್ಟದ ಶಿಕ್ಷಣ ನೀಡಲು ವಿದ್ಯಾರ್ಥಿಗಳ ಮತ್ತು ಶಿಕ್ಷಕರ ಅನುಪಾತವನ್ನು ಸಡಿಲಗೊಳಿಸಲು ಎಷ್ಟು ಕಾಲಾವಕಾಶ ಬೇಕು; ಇದರ ಬಗ್ಗೆ ಸರ್ಕಾರದ ಮುಂದಿನ ನಿಲುವೇನು? | ಶಿಕ್ಷಕ ವಿದ್ಯಾರ್ಥಿಗಳ ಅನುಪಾತವನ್ನು ಸಡಿಲಗೊಳಿಸುವ ವಿಷಯವು ಪರಿಶೀಲನೆಯಲ್ಲಿರುತ್ತದೆ. |

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ.

ಸಂಖ್ಯೆ: ಇಡಿ 327 ಎಸ್ಎಲ್‌ಬಿ 2018)